**ಓಎಸ್ ನಂ. 374/2018**
**ಡಿ.ಡಬ್ಲ್ಯೂ -1**

**ಸಾಕ್ಷಿಯನ್ನು ದಿನಾಂಕಃ- 25.02.2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಪಾಟೀಸವಾಲುಃ ಶ್ರೀ ಎಂ.ಎನ್.ಬಿ. ವಾದಿ ಪರ ವಕೀಲರಿಂದ**

ಸರ್ವೆ ನಂ. 55/4 ರ ವಿಸ್ತೀರ್ಣ 18 ಗುಂಟೆ ಆಸ್ತಿ ನಮಗೆ ಸೇರಿದ ಆಸ್ತಿ ಅಲ್ಲ ಎಂದರೆ ಸರಿಯಲ್ಲ. ಪ್ರಮಾಣ ಪತ್ರದಲ್ಲಿ ಸದರಿ ಆಸ್ತಿ ನಮಗೆ ಸೇರಿದ್ದು ಎಂದು ಸುಳ್ಳಾಗಿ ನಮೂದಿಸಿರುತ್ತೇನೆ ಎಂದರೆ ಸರಿಯಲ್ಲ. ಕ್ರಯ ಪತ್ರವನ್ನು ಪಡೆದ ನಂತರ ಸದರಿ ಆಸ್ತಿ ಈಶ್ವರಪ್ಪನವರಿಗೆ ಸೇರಿದ್ದು ಅವರು ಮರಣಹೊಂದಿದ ನಂತರ ಅವರ ವಾರಸುದಾರರಾದ ವಾದಿಗೆ ಸೇರಿದ್ದು ಎಂದರೆ ಸರಿಯಲ್ಲ. ದಾವಾ ಆಸ್ತಿ ನಮಗೆ ಸೇರಿದ್ದು ಎಂದು ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ನಮ್ಮ ತಾಯಿ ಈಶ್ವರಪ್ಪನವರಿಗೆ ಶುದ್ಧ ಕ್ರಯ ಪತ್ರವನ್ನು ಮಾಡಿ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿಯಾಗಿರುವುದರಿಂದ ಈಶ್ವರಪ್ಪನವರು ಮಾಲೀಕರು ಎಂದರೆ ಸರಿಯಲ್ಲ.

**2.** ರೂ.5,550/- ನ್ನು ಈಶ್ವರಪ್ಪನವರಿಂದ ಪಡೆದುಕೊಂಡು ನಾವು ಕ್ರಯ ಪತ್ರವನ್ನು ಮಾಡಿಕೊಟ್ಟಿರುತ್ತೇವೆ ಎಂದರೆ ಸರಿಯಲ್ಲ ಸದರಿ ಹಣವನ್ನು ಈಶ್ವರಪ್ಪನವರು ಸಾಲವಾಗಿ ಕೊಟ್ಟಿರಲಿಲ್ಲ ಎಂದರೆ ಸರಿಯಲ್ಲ. ನಾನು ಅಡಮಾನ ಪತ್ರವನ್ನು ಈಶ್ವರಪ್ಪನವರಿಗೆ ಬರೆದುಕೊಟ್ಟಿರುವುದಿಲ್ಲ ಶುದ್ದ ಕ್ರಯ ಪತ್ರವನ್ನು ಬರೆದುಕೊಟ್ಟಿರುತ್ತೇವೆ ಎಂದರೆ ಸರಿಯಲ್ಲ. ನನಗೆ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಕ್ರಯ ಪತ್ರವನ್ನು ಮಾಡಿಕೊಟ್ಟಿಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**3.** ಕ್ರಯ ಪತ್ರವನ್ನು ಮಾಡಿಕೊಟ್ಟ ನಂತರ ನಾನು ಮಾಡಿರುವ ವ್ಯವಹಾರಗಳು ಕಾನೂನು ಪ್ರಕಾರ ಊರ್ಜಿತವಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯು ನಮಗೆ ಸೇರಿದ್ದು ಎಂದು ಮಾಡಿಕೊಂಡಿರುವ ದಾಖಲೆಗಳು ಸುಳ್ಳು ದಾಖಲೆಗಳು ಎಂದರೆ

ಸರಿಯಲ್ಲ. 18 ಗುಂಟೆಗೆ ಸಂಬಂಧಪಟ್ಟಂತೆ ವಿಭಾಗ ಮಾಡಿಕೊಳ್ಳಲು ನಮಗೆ ಹಕ್ಕು, ಮಾಲೀಕತ್ವ ಮತ್ತು ಸ್ವಾಧೀನ ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ದಾವೆಯಲ್ಲಿ ಹಾಜರು ಪಡಿಸಿರುವಂತಹ ದಾಖಲೆಗಳು ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಊರ್ಜಿತವಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಯಾವುದೇ ದಾಖಲೆಗಳನ್ನು ಮಾಡಲು ನಮಗೆ ಹಕ್ಕು ಸ್ವಾಧೀನ ಇಲ್ಲ ಎಂದರೆ ಸರಿಯಲ್ಲ.

**4.** ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಕ್ರಯ ಪತ್ರವನ್ನು ಮಾಡಿಕೊಟ್ಟಿದ್ದು ಮತ್ತು ಸ್ವಾಧೀನವನ್ನು ಬಿಟ್ಟುಕೊಟ್ಟಿರುವುದರಿಂದ ದಾವಾ ಸ್ವತ್ತಿನಲ್ಲಿ ನಮಗೆ ಯಾವುದೇ ಹಕ್ಕು ಮತ್ತು ಸ್ವಾಧೀನ ಇರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ನನಗೆ ಯಾವುದೇ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. ಈಶ್ವರಪ್ಪನವರು ಸರ್ಕಾರಿ ಉದ್ಯೋಗಿಯಾಗಿದ್ದರಿಂದ ಖಾತೆ ಬದಲಾವಣೆಯಾಗಿರುವುದಿಲ್ಲ ಮತ್ತು ದಾವಾ ಸ್ವತ್ತಿನಲ್ಲಿ ನಮಗೆ ಯಾವುದೇ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

**ಓ. ಹೇ.ಕೇ.ಸರಿ ಇದೆ.**

ಸಹಿ/-

**ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್ ಸಿ , ಮಧುಗಿರಿ**